ಸಾಕ್ಷಿಯನ್ನು ದಿನಾಂಕಃ **10-06-2026** ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ ಶ್ರೀ. ವಿ ಆರ್ ಎನ್., ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಕುರಿತು ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯ ನಾನೇ ಹೇಳಿ ಬರೆಸಿದ್ದು, ಅವು ಸತ್ಯವಾಗಿರುತ್ತದೆ.

ನಾನು ನ್ಯಾಯಾಲಯದ ಮುಂದೆ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ. ಮದುವೆಯ ಆಮಂತ್ರಣ ಪತ್ರಿಕೆಯನ್ನು **ನಿಪಿ.1** ಎಂದು, ವಿವಾಹ ನೋಂದಣಿ ಪ್ರಮಾಣ ಪತ್ರದ ನೋಟರೈಸ್ಡ ಪ್ರತಿಯನ್ನು **ನಿಪಿ.2** ಎಂದು, ಅರ್ಜಿದಾರರ ಆಧಾರ ಕಾರ್ಡಿನ ನೋಟರೈಸ್ಡ ಪ್ರತಿಯನ್ನು **ನಿಪಿ.3** ಎಂದು ಗುರುತಿಸಲಾಯಿತು. ( ನಿಪಿ2 ಮತ್ತು 3 ನ್ನು ಮೂಲ ದಾಖಲೆಯೊಂದಿಗೆ ಪರಿಶೀಲಿಸಿ, ಹಿಂದಿರುಗಿಸಲಾಯಿತು.)

**ಪಾಟೀ ಸವಾಲುಃ ಶ್ರೀ. ಪಿ ಜಿ ಟಿ., ವಕೀಲರಿಂದಃ**

ನನ್ನ ಹಾಗೂ ಎದುರುದಾರರ ವಿವಾಹವು ಹಿರಿಯರ ಸಮ್ಮುಖದಲ್ಲಿ ನಡೆದಿದೆ ಎಂದರೆ ಸರಿ. ಮದುವೆಯ ಸಂದರ್ಭದಲ್ಲಿ ಎದುರುದಾರನು ನನ್ನಲ್ಲಿ ವರದಕ್ಷಿಣೆ ಕೇಳಿದ್ದು ಇರುವುದಿಲ್ಲ. ಮದುವೆಯ ನಂತರ ನಾವು ಒಟ್ಟಾಗಿ 3 ತಿಂಗಳು ಚೆನ್ನಾಗಿದ್ದೆವು. ಎದುರುದಾರರು 2 ನೇ ಮದುವೆಯಾದ ಬಗ್ಗೆ ಯಾವುದೇ ದಾಖಲಾತಿ ಇಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

**-Sd/-**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾದಂ..**

**ಹೊನ್ನಾವರ.**

ಸಾಕ್ಷಿಯನ್ನು ದಿನಾಂಕಃ **10-06-2026** ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ ಶ್ರೀ. ಪಿ ಜಿ ಟಿ., ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಕುರಿತು ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯ ನಾನೇ ಹೇಳಿ ಬರೆಸಿದ್ದು, ಅವು ಸತ್ಯವಾಗಿರುತ್ತದೆ.

**ಪಾಟೀ ಸವಾಲುಃ ಶ್ರೀ. ವಿ ಆರ್ ಎನ್ , ವಕೀಲರಿಂದಃ**

ನನ್ನ ಹಾಗೂ ಅರ್ಜಿದಾರರ ವಿವಾಹವು ನೋಂದಣಿ ಆಗಿದೆ ಎಂದರೆ ಸರಿ. ಅರ್ಜಿದಾರರು ಮನೆಯಲ್ಲಿ 3 ತಿಂಗಳು ಇದ್ದರು. ನಾನು ಅರ್ಜಿದಾರರರನ್ನು ಮನೆಯಿಂದ ಹೊರಹಾಕಿದ್ದೇನೆ ಎಂದರೆ ಆಕೆಯೇ ಮನೆಯಿಂದ ಹೊರಗೆ ಹೋಗಿದ್ದಾಳೆ. ಆಕೆಯು ಪೊಲೀಸ್ ಠಾಣೆಯಲ್ಲಿ ದೂರು ನೀಡಿದಳು. ನಾನು ಮತ್ತೊಂದು ಮದುವೆಯಾಗಿದ್ದೇನೆ ಎಂದರೆ ಸರಿ. ನಾನು ಜಮಾತ್ತಿನಲ್ಲಿ 2 ನೇ ಮದುವೆಯಾದ ಬಗ್ಗೆ ದಾಖಲೆ ಮಾಡಿಸಿದ್ದೇನೆ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

**-Sd/-**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾದಂ..**
**ಹೊನ್ನಾವರ.**